**ಓ.ಎಸ್.ನಂಃ 276/2021**

**ಡಿಡಬ್ಲ್ಯೂ-1**

**ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 11.02.2026 ರಂದು ಪ್ರಮಾಣಿಕರಿಸಲಾಯಿತು.**

**ಮುಂದುವರೆದ ಪಾಟೀ ಸವಾಲು: ವಾದಿ ಪರ ವಕೀಲರಿಂದಃ**

ನನ್ನ ತಾತ ಸುಬ್ಬಪ್ಪರವರ ಶಾಲಾ ದಾಖಲಾತಿಗಳು ಇಲ್ಲ. ಕಾರಣ ಅವರು ಶಾಲೆಗೆ ಹೋಗಿರಲಿಲ್ಲ. ನನ್ನ ತಾತ ಸುಬ್ಬಪ್ಪರವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಸದರಿ ಮರಣ ಪ್ರಮಾಣ ಪತ್ರದಲ್ಲಿ ಸುಬ್ಬಪ್ಪರವರ ತಂದೆ ಹೆಸರು ಚೆನ್ನಪ್ಪ ಎಂದು ನಮೂದಾಗಿಲ್ಲ ಎಂದರೆ ಸರಿ. ನನ್ನ ತಾತ ಸುಬ್ಬಪ್ಪ 2000 ನೇ ಇಸವಿಯಲ್ಲಿ ಮರಣ ಹೊಂದಿರುತ್ತಾರೆ. ನಿಡಿ14 ರಂತೆ ವಂಶವೃಕ್ಷ ಪ್ರಮಾಣ ಪತ್ರವನ್ನು ಕಂದಾಯ ದಾಖಲೆಯಿಂದ ನಾನು ಪಡೆದು ಹಾಜರುಪಡಿಸಬಲ್ಲೆ. ನಿಡಿ9 ರ ನಡವಳಿಕೆ ನಡೆದಿಲ್ಲ ಮತ್ತು ಆ ದಾಖಲೆಯನ್ನು ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಸಾಕ್ಷಿಗೆ ಒಂದು ಹಿಂಬರಹವನ್ನು ತೋರಿಸಲಾಗಿ ಅದನ್ನು ಓದಿದ್ದು, ಸದರಿ ಹಿಂಬರಹದಲ್ಲಿ ನಿಡಿ9 ರಂತೆ ದಾಖಲೆ ಶಿಥೀಲವಾಗಿದೆ ಎಂದು ನಮೂದು ಇದ್ದು, ಅದನ್ನು ಏನೂ ಹೇಳುತ್ತೀರಿ ಎಂದರೆ ಸಾಕ್ಷಿ ಸದರಿ ಹಿಂಬರಹ ಸುಳ್ಳು ಎಂದು ನುಡಿಯುತ್ತಾರೆ. ನಾನು ಚೆನ್ನಪ್ಪ ಮತ್ತು ಸುಬ್ಬಮ್ಮರವರ ವಾರಸುದಾರನಲ್ಲ ಎಂದರೆ ಸರಿಯಲ್ಲ. ನಾನು ಅವರಿಗೆ ವಾರಸುದಾರ ಎಂದು ತೋರಿಸಲು ನನ್ನ ಬಳಿ ದಾಖಲೆ ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗೂ ನನಗೂ ಯಾವುದೆ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ನಾನು ವಾದಿಗಳಿಗೆ ತೊಂದರೆ ಕೊಡುವ ಸಲುವಾಗಿ ಕಂದಾಯ ಅಧಿಕಾರಿಗಳ ಜೊತೆ ಶಾಮಿಲಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಿಡಿ12 ನಾನು ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಿಡಿ12 ನಿಜಾಂಶ ದಾಖಲೆಯಾಗಿದ್ದರೆ ಅದರಲ್ಲಿ ಸುಬ್ಬಪ್ಪನ ತಂದೆ ಮತ್ತು ತಾಯಿ ಹೆಸರು ನಮೂದಾಗುತ್ತಿತ್ತು ಎಂದರೆ ಸರಿಯಲ್ಲ. ದಾವಾ ಸ್ವತ್ತನ್ನು ಕಬಳಿಸುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ